# 12 ಸ್ಥಾಯಿ ಸಮಿತಿಗಳಿಗೆ ಚುನಾವಣೆ: ಕೋರ್ಟ್ ಮೆಟ್ಟಿಲೇರಿದ ಅಧ್ಯಕ್ಷರು

## ಅವಧಿ ಪೂರ್ಣಗೊಳ್ಳುವ ಮುನ್ನ ಎಲೆಕ್ಷನ್‌ಗೆ ಆಕ್ಷೇಪ ಚುನಾವಣೆ ಅಧಿಸೂಚನೆ ರದ್ದುಗೊಳಿಸಲು ಕೋರಿ ಅರ್ಜಿ

26/9/19

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಿಬಿಎಂಪಿ ಸ್ಥಾಯಿ ಸಮಿತಿಯ ಅಧಿಕಾರ ಅವಧಿ ಪೂರ್ಣಗೊಳ್ಳುವ ಮುನ್ನ 12 ಸ್ಥಾಯಿ ಸಮಿತಿಗಳಿಗೆ ಚುನಾವಣೆ ನಡೆಸಲು ಪ್ರಾದೇಶಿಕ ಆಯುಕ್ತರು ಹೊರಡಿಸಿರುವ ಅಧಿಸೂಚನೆ ವಿರುದ್ಧ ಸ್ಥಾಯಿ ಸಮಿತಿ ಅಧ್ಯಕ್ಷರು ಹೈಕೋರ್ಟ್ ಮೆಟ್ಟಿಲೇರಿದ್ದಾರೆ.

ಬಿಬಿಎಂಪಿಯ 12 ಸ್ಥಾಯಿ ಸಮಿತಿಯ ಅಧಿಕಾರ ಅವಧಿ ಡಿಸೆಂಬರ್ 4ಕ್ಕೆ ಪೂರ್ಣಗೊಳ್ಳಲಿದೆ. ಆದರೆ, ಎರಡು ತಿಂಗಳು ಮುಂಚಿತವಾಗಿ ಅಂದರೆ ಅ.1ರಂದು ಮೇಯರ್ ಮತ್ತು ಉಪ ಮೇಯರ್ ಚುನಾವಣೆಯ ಜತೆಗೆ ಸ್ಥಾಯಿ ಸಮಿತಿಗಳಿಗೆ ಸದಸ್ಯರ ಆಯ್ಕೆಗೆ ಪ್ರಾದೇಶಿಕ ಆಯುಕ್ತರು ಅಧಿಸೂಚನೆ ಹೊರಡಿಸಿದ್ದಾರೆ. ಇದರಿಂದ ಹಾಲಿ ಇರುವ ಸ್ಥಾಯಿ ಸಮಿತಿ ಸದಸ್ಯರ ಅಧಿಕಾರ ಅವಧಿ ಮೊಟಕುಗೊಳ್ಳಲಿದೆ. ಹಾಗಾಗಿ, ಪ್ರಾದೇಶಿಕ ಆಯುಕ್ತರ ಹೊರಡಿಸಿರುವ ಅಧಿಸೂಚನೆ ರದ್ದುಗೊಳಿಸಿ ಅಧಿಕಾರ ಅವಧಿ ಪೂರ್ಣಗೊಳ್ಳುವವರೆಗೆ ಹಾಲಿ ಇರುವ ಸ್ಥಾಯಿ ಸಮಿತಿ ಮುಂದುವರಿಸಬೇಕು ಎಂದು ಸ್ಥಾಯಿ ಸಮಿತಿ ಅಧ್ಯಕ್ಷರು ಹೈಕೋರ್ಟ್ ಮೊರೆ ಹೋಗಿದ್ದಾರೆ. ಗುರುವಾರ ಅರ್ಜಿ ವಿಚಾರಣೆ ಬರುವ ಸಾಧ್ಯತೆಗಳಿವೆ.

ಈ ಹಿಂದೆ ಸ್ಥಾಯಿ ಸಮಿತಿ ಚುನಾವಣೆಯನ್ನು ಮೇಯರ್ ಚುನಾವಣೆ ಜೊತೆ ನಡೆಸಬೇಕೋ ಅಥವಾ ಅವಧಿ ಮುಗಿದ ನಂತರವೇ ನಡೆಸಬೇಕೇ ಎಂಬ ಬಗ್ಗೆ ಪರ-ವಿರೋಧ ಅಭಿಪ್ರಾಯ ವ್ಯಕ್ತವಾಗಿತ್ತು. ಈ ಬಗ್ಗೆ ನಗರಾಭಿವೃದ್ಧಿ ಇಲಾಖೆ ಕಾನೂನು ತಜ್ಞರ ಅಭಿಪ್ರಾಯ ಪಡೆಯಿತು. ಕಾನೂನು ತಜ್ಞರು ಮೇಯರ್ ಚುನಾವಣೆ ಜತೆಗೆ ಸ್ಥಾಯಿ ಸಮಿತಿಗಳಿಗೂ ಚುನಾವಣೆ ನಡೆಸುವುದು ಸೂಕ್ತ ಎಂದು ಸಲಹೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಮೇಯರ್ ಹಾಗೂ ಉಪಮೇಯರ್ ಚುನಾವಣೆ ಜತೆ ಸ್ಥಾಯಿ ಸಮಿತಿಗೂ ಚುನಾವಣೆ ನಡೆಸಲು ಅಧಿಸೂಚನೆ ಹೊರಡಿಸಲಾಗಿತ್ತು.